# ಎನ್‌ಐಟಿಕೆಯಲ್ಲಿ ಒಲಿಂಪಿಕ್ ಗಾತ್ರದ ಈಜುಕೊಳ ಉದ್ಘಾಟನೆ

**ವಿಕ ಸುದ್ದಿಲೋಕ** ಮಂಗಳೂರು

ಸುರತ್ಕಲ್‌ನ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ (ಎನ್ ಐಟಿಕೆ) ತನ್ನ ಹೊಸ ಅತ್ಯಾಧುನಿಕ ಈಜುಕೊಳದ ಉದ್ಘಾಟನೆ ಬುಧವಾರ ನಡೆಯಿತು.

ಭಾರತೀಯ ರಾಷ್ಟ್ರೀಯ ಅಥ್ಲೆಟಿಕ್ಸ್ ತಂಡದ ಮುಖ್ಯ ತರಬೇತುದಾರ ಪಿ. ರಾಧಾಕೃಷ್ಣನ್ ನಾಯರ್ ಅತಿಥಿಯಾಗಿದ್ದರು. ಎನ್‌ಐಟಿಕೆ ನಿರ್ದೇಶಕ ಪ್ರೊ. ಬಿ.ರವಿ, ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




ಈಜುಕೊಳ ಒಲಿಂಪಿಕ್ ಗಾತ್ರದಾಗಿದ್ದು (50 ಮೀ X 25 ಮೀ) 10 ಪಥಗಳು ಮತ್ತು ಪರಿಸರ ಸ್ನೇಹಿ, ರಾಸಾಯನಿಕ ಮುಕ್ತ ನೀರಿನ ಸಂಸ್ಕರಣೆಗಾಗಿ ಸುಧಾರಿತ ಓಝೋನ್ ಆಧರಿತ ಶೋಧನಾ ವ್ಯವಸ್ಥೆಯನ್ನು ಒಳಗೊಂಡಿದೆ. 7.39 ಕೋಟಿ ರೂ. ವೆಚ್ಚದಲ್ಲಿ ಇದನ್ನು ನಿರ್ಮಿಸಲಾಗಿದೆ.

Vijaya karnataka, Date:21/11/24, p, no -02